ಕರ್ನಾಟಕ ಸರ್ಕಾರ

**<u>ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ</u>**

ಸಂಖ್ಯೆ:ಬಿಟಿಇ:04/ಇ.ಸಿ.ಎಸ್(1)/2021

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com

ದಿನಾಂಕ:17-10-2021

**<u>ಸುತ್ತೋಲೆ</u>**

ವಿಷಯ: ದಿನಾಂಕ:19.10.2021 ಮಂಗಳವಾರ ನಡೆಯಬೇಕಾದ ಡಿಪ್ಲೋಮ ಪರೀಕ್ಷೆಗಳನ್ನು ಮುಂದೂಡಿ, ದಿನಾಂಕ:22.10.2021 ರ ಶುಕ್ರವಾರದಂದು ನಡೆಸುವ ಬಗ್ಗೆ.

ಉಲ್ಲೇಖ:ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 38 ಹೆಚ್‌ಹೆಚ್‌ಎಲ್ 2021, ದಿನಾಂಕ:16.10.2021

**************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳಲ್ಲಿ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಗಳು ವೇಳಾಪಟ್ಟಿಯಂತೆ ನಡೆಯುತ್ತಿವೆ.

ಉಲ್ಲೇಖದ ಸರ್ಕಾರದ ಅಧಿಸೂಚನೆಯಲ್ಲಿ, ದಿನಾಂಕ:19.10.2021 ರಂದು ಈದ್ ಮಿಲಾದ್ ಪ್ರಯುಕ್ತ ಸಾರ್ವತ್ರಿಕ ರಜೆಯನ್ನು ಮಂಜೂರು ಮಾಡಿ ಆದೇಶಿಸಿದೆ.

ಆದಕಾರಣ ಅಕ್ಟೋಬರ್/ನವೆಂಬರ್ 2021ರ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಯ ದಿನಾಂಕ:19.10.2021 ರ ಮಂಗಳವಾರದಂದು ನಡಯಬೇಕಾಗಿದ್ದ ಎಲ್ಲಾ ಥಿಯರಿ ಪರೀಕ್ಷೆಗಳನ್ನು ಮಾತ್ರ ಮುಂದೂಡಿ ಅಂದಿನ ಪರೀಕ್ಷೆಗಳನ್ನು ದಿನಾಂಕ: ದಿನಾಂಕ:22.10.2021 ರ ಶುಕ್ರವಾರ ನಡೆಸಲಾಗುವುದು. ಪರೀಕ್ಷಾ ಸಮಯದಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ. ಈ ವಿಷಯವನ್ನು ವಿದ್ಯಾರ್ಥಿಗಳು/ ಉಪನ್ಯಾಸಕರುಗಳು/ಪೋಷಕರುಗಳ ಗಮನಕ್ಕೆ ತಪ್ಪದೇ ತರುವಂತೆ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ.

ಉಳಿದಂತೆ ಪರೀಕ್ಷಾ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕಾರ್ಯದರ್ಶಿ 17/10/2021

ಇವರಿಗೆ,
ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಪ್ರಾಂಶುಪಾಲರುಗಳು/ ಮುಖ್ಯ ಅಧೀಕ್ಷಕರು/ ಮುಖ್ಯ ವೀಕ್ಷಕರು/ ಉಪ ಮುಖ್ಯ ಅಧೀಕ್ಷಕರುಗಳಿಗೆ – ಮಾಹಿತಿ ಮತ್ತು ಸೂಚನಾ ಫಲಕದಲ್ಲಿ ಪ್ರಕಟಿಸಲು.

ಪ್ರತಿ:

1. ಮಾನ್ಯ ಆಯುಕ್ತರ ಆಪ್ತ ಶಾಖೆ, ಕಾ.&ತಾಂ.ಶಿ.ಇಲಾಖೆ –ಮಾಹಿತಿಗಾಗಿ
2. ಮಾನ್ಯ ನಿರ್ದೇಶಕರ ಆಪ್ತಶಾಖೆ, ತಾಂ.ಶಿ. –ಮಾಹಿತಿಗಾಗಿ
3. ರಾಜ್ಯ ಎಲ್ಲಾ ಜಿಲ್ಲಾ ಖಜಾನೆ ಅಧಿಕಾರಿಗಳು / ಪೋಲೀಸ್ ಠಾಣಾಧಿಕಾರಿಗಳಿಗೆ
4. ಇ-ಗವರ್ನೆನ್ಸ್ ವಿಭಾಗ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
5. ಇಸಿಎಸ್ ವಿಭಾಗಕ್ಕೆ
6. ಹೆಚ್ಚುವರಿ ಪ್ರತಿ.

Scanned with DocScan